2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ

ಸಿ.ಸಿ. 735/2023

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.07**

**ದಿನಾಂಕ:** 13.03.2025 **ಸಿಡಬ್ಲ್ಯೂ.20**

| | |
|---|---|
| ಹೆಸರು | ಮುತ್ತನಗೌಡ |
| ತಂದೆ ಹೆಸರು | ಶಿವನಗೌಡ ಗೌಡಪ್ಪಗೌಡರ |
| ವಯಸ್ಸು | 47 ವರ್ಷ |
| ಉದ್ಯೋಗ | ಸಿ ಪಿ ಐ |
| ವಾಸ ಸ್ಥಳ | ಹೊಸನಗರ |

**ಮುಖ್ಯ ವಿಚಾರಣೆ:** ಸಹಾಯಕ ಸರ್ಕಾರಿ ಅಭಿಯೋಜಕರಿಂದ:

ನಾನು ಜನವರಿ 2023 ರಿಂದ ಜೂನ್ 2023 ರವರೆಗೆ ಹರಿಹರ ವೃತ್ತದಲ್ಲಿ ಸಿ ಪಿ ಐ ಆಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿ: 31.01.2023 ರಂದು ಪ್ರಕರಣದ ಕಡತವನ್ನು ಚಾಸಾ.21 ರವರಿಂದ ಪಡೆದುಕೊಂಡು ತನಿಖೆ ಮುಂದುವರೆಸಿರುತ್ತೇನೆ. ನಂತರ ದಿ: 15.02.2023 ರಂದು ಆರ್ ಟಿ ಒ ಕಚೇರಿಯಿಂದ ಐ ಎಂ ವಿ ವರದಿ ಪಡೆದುಕೊಂಡಿರುತ್ತೇನೆ. ಸಾಕ್ಷಿಯು ಗುರುತಿಸಿದ ಐ ಎಂ ವಿ ವರದಿಯನ್ನು ನಿಪಿ. 14 ಎಂದು ಸಾಕ್ಷಿಯ ಸಹಿಯನ್ನು ನಿಪಿ.14 (ಎ) ಎಂದು ಗುರುತಿಸಲಾಯಿತು. ನಂತರ ಮೃತ ವಿಜಯಕುಮಾರ ರವರ ಪಿ ಎಂ ವರದಿಯನ್ನು ಪಡೆದಿರುತ್ತೇನೆ. ಸಾಕ್ಷಿಯು ಗುರುತಿಸಿದ ಪಿ ಎಂ ವರದಿಯನ್ನು ನಿಪಿ. 15 ಎಂದು ಸಾಕ್ಷಿಯ ಸಹಿಯನ್ನು ನಿಪಿ.15 (ಎ) ಎಂದು ಗುರುತಿಸಲಾಯಿತು. ನಂತರ ಚಾಸಾ.1 ರವರಿಗೆ ಐ ಎಂ ವಿ ಮೋಟಾರ್ ವಾಹನ ಕಾಯ್ದೆ ಕಲಂ 133 ರಡಿ ನೋಟಿಸ್ ನೀಡಿರುತ್ತೇವೆ. ಹಾಗೂ ಅದೇ ದಿನ ದಾಖಲಾತಿಗಳನ್ನು ಮತ್ತು ಉತ್ತರವನ್ನು ಪಡೆದಿರುತ್ತೇನೆ. ಸಾಕ್ಷಿಯು ಗುರುತಿಸಿದ ನೋಟಿಸನ್ನು ನಿಪಿ.16 ಎಂದು ಸಾಕ್ಷಿಯ ಸಹಿಯನ್ನು ನಿಪಿ.16 (ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಉತ್ತರವನ್ನು ನಿಪಿ.17 ಎಂದು ಸಾಕ್ಷಿಯ ಸಹಿಯನ್ನು ನಿಪಿ.17 (ಎ) ಎಂದು ಗುರುತಿಸಲಾಯಿತು. ನಂತರ ಸದರಿಯವರಿಂದ ಇಂಡಿಮಿನಿಟಿ ಬಾಂಡ ಪಡೆದು ಕೆಎ /17 ಬಿ 3419 ನೇ ವಾಹನ ಬಿಡುಗಡೆ ಮಾಡಿ ಅವರ ಹೇಳಿಕೆ ಪಡೆದಿರುತ್ತೇನೆ. ಸಾಕ್ಷಿಯು ಗುರುತಿಸಿದ ಬಾಂಡನ್ನು ನಿಪಿ.18 ಎಂದು ಸಾಕ್ಷಿಯ ಸಹಿಯನ್ನು ನಿಪಿ.18 (ಎ) ಎಂದು ಗುರುತಿಸಲಾಯಿತು. ಅದೇ ದಿನ ಆರೋಪಿ ಚಾಲನೆ ಮಾಡುತ್ತಿದ್ದ ವಾಹನ ಮಾಲೀಕರಾದ ಮುಸ್ತೀಂ ರವರಿಗೆ ಐ ಎಂ ವಿ ಮೋಟಾರ್ ವಾಹನ ಕಾಯ್ದೆ ಕಲಂ 133 ರಡಿ ನೋಟಿಸ್ ನೀಡಿರುತ್ತೇವೆ. ಹಾಗೂ ಅದೇ ದಿನ ದಾಖಲಾತಿಗಳನ್ನು ಮತ್ತು ಉತ್ತರವನ್ನು ಪಡೆದಿರುತ್ತೇನೆ. ಸಾಕ್ಷಿಯು ಗುರುತಿಸಿದ ನೋಟಿಸನ್ನು ನಿಪಿ.19 ಎಂದು ಸಾಕ್ಷಿಯ ಸಹಿಯನ್ನು

ನಿಪಿ.19 (ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಉತ್ತರವನ್ನು ನಿಪಿ.20 ಎಂದು ಸಾಕ್ಷಿಯ ಸಹಿಯನ್ನು ನಿಪಿ.20 (ಎ) ಎಂದು ಗುರುತಿಸಲಾಯಿತು. ನಂತರ ಸದರಿಯವರಿಂದ ಇಂಡಿಮಿನಿಟಿ ಬಾಂಡ ಪಡೆದು ಕೆಎ /68 ಇ 9562 ನೇ ವಾಹನ ಬಿಡುಗಡೆ ಮಾಡಿ ಅವರ ಹೇಳಿಕೆ ಪಡೆದಿರುತ್ತೇನೆ. ಸಾಕ್ಷಿಯು ಗುರುತಿಸಿದ ಬಾಂಡನ್ನು ನಿಪಿ.21 ಎಂದು ಸಾಕ್ಷಿಯ ಸಹಿಯನ್ನು ನಿಪಿ.21 (ಎ) ಎಂದು ಗುರುತಿಸಲಾಯಿತು. ನಂತರ ಆರೋಪಿಗೆ 41 ಎ ರೀತ್ಯಾ ನೋಟಿಸ ನೀಡಿ ವಿಚಾರಣೆಗೆ ಹಾಜರಾಗಲು ತಿಳಿಸಿರುತ್ತೇವೆ. ಸಾಕ್ಷಿಯು ಗುರುತಿಸಿದ ನೋಟಿಸನ್ನು ನಿಪಿ.22 ಎಂದು ಸಾಕ್ಷಿಯ ಸಹಿಯನ್ನು ನಿಪಿ.22 (ಎ) ಎಂದು ಗುರುತಿಸಲಾಯಿತು.

ದಿಃ 15.03.2023 ರಂದು ಗಾಯಾಳು ಹರೀಶರವರ ಗಾಯದ ಪ್ರಮಾಣ ಪತ್ರವನ್ನು ಚಿಗಟೇರಿ ಆಸ್ಪತ್ರೆಯಿಂದ ಪಡೆದುಕೊಂಡಿರುತ್ತೇನೆ. ಸಾಕ್ಷಿಯು ಗುರುತಿಸಿದ ಗಾಯದ ಪ್ರಮಾಣ ಪತ್ರವನ್ನು ನಿಪಿ.23 ಎಂದು ಸಾಕ್ಷಿಯ ಸಹಿಯನ್ನು ನಿಪಿ.23 (ಎ) ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ.11 ಮಹಮದ್ ಖಲೀಲ್ ರವರ ಹೇಳಿಕೆ ಪಡೆದಿರುತ್ತೇನೆ. ಆರೋಪಿ ಈ ದಿನ ಇದ್ದಾರೆ.

ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.21 ರವರಿಗೆ ನೀಡಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಜಿ ಕೆ ಎನ್ ವಕೀಲರಿಂದಃ**

ನನ್ನ ತನಿಖಾ ಕಾಲಕ್ಕೆ ನಾನು ಘಟನಾ ಸ್ಥಳಕ್ಕೆ ಬೇಟಿ ನೀಡಿಲ್ಲ ಎಂದರೆ ಸರಿ. ಘಟನಾ ಸ್ಥಳದ ಅಕ್ಕಪಕ್ಕದಲ್ಲಿ ಏನಿತ್ತು ಎಂದು ವಿಚಾರಣೆ ಮಾಡಿಲ್ಲ ಎಂದರೆ ಸರಿ. ಚಾಸಾ.11 ಮತ್ತು 12 ರವರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಗಾಯಾಳು ಹಾಗೂ ಮೃತನ ಕುಟುಂಬಕ್ಕೆ ಪರಿಹಾರ ಧನ ಸಿಗಲಿ ಎಂದು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ